# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 765 |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10.03.2026 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ನಗರದಲ್ಲಿ ಈಗಾಗಲೇ ಕೈಗೊಳ್ಳಲಾಗಿರುವ ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿದ್ದು, ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕೋಲಾರ ನಗರದ ಭೌಗೋಳಿಕ ಮಟ್ಟಗಳ ಅನ್ವಯ ನಗರವನ್ನು ಎರಡು ಜೋನ್ ಗಳಾಗಿ ವಿಂಗಡಿಸಲಾಗಿದೆ. ಒಳಚರಂಡಿ ಕೊಳವೆಗಳಲ್ಲಿ ಹರಿಯುವ ತ್ಯಾಜ್ಯ ನೀರು ಗುರುತ್ವಾಕರ್ಷಣ ಕೊಳವೆ ಮಾರ್ಗದಿಂದ ವೆಟ್ ವೆಲ್ ಗೆ ಹರಿದು ನಂತರ ಏರು ಕೊಳವೆ ಮಾರ್ಗದ ಮೂಲಕ ತ್ಯಾಜ್ಯ ನೀರು ಶುದ್ಧೀಕರಣ ಘಟಕಕ್ಕೆ ಹರಿಸಿ ನೀರನ್ನು ಶುದ್ಧೀಕರಿಸಲು ವಿನ್ಯಾಸಿಸಲಾಗಿದೆ. ಒಳಚರಂಡಿ ಕಾಮಗಾರಿಗಳು ಅವೈಜ್ಞಾನಿಕವಾಗಿರುವುದಿಲ್ಲ. |
| ಆ) | ಈ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಇರುವುದರಿಂದ ಒಳಚರಂಡಿಗಳು ತುಂಬಿ ಪಟ್ಟಣದ ರಸ್ತೆಗಳಲ್ಲಿ ಕೊಳಚೆ ನೀರು ಹರಿದು ಸೊಳ್ಳೆಗಳು ಉತ್ಪತ್ತಿಯಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ವ್ಯತಿರಿಕ್ತ ಪ್ರಭಾವ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಒಳಚರಂಡಿ ಕೊಳವೆ ಮತ್ತು ಛೇಂಬರ್ ಗಳು ಬ್ಲಾಕ್ ಆಗಿ ಕೊಳಚೆ ನೀರು ರಸ್ತೆ ಮೇಲೆ ಹರಿಯುತ್ತಿರುವ ಸಂದರ್ಭಗಳಲ್ಲಿ ನಗರಸಭೆ ನಿಧಿಯಿಂದ ನಿರ್ವಹಣೆಗೆ ಟೆಂಡರ್ ಆಹ್ವಾನಿಸಲಾಗಿದ್ದು ಒಳ ಚರಂಡಿ ಹೆಚ್ಚುವರಿ ಕೊಳವೆ, ಛೇಂಬರ್‌ಗಳ ದುರಸ್ಥಿ ಕೆಲಸಗಳನ್ನು ನಿರ್ವಹಿಸಲಾಗುತ್ತಿರುತ್ತದೆ<br><br>ಜಲಶುದ್ಧಿ ಅಭಿಯಾನ ಯೋಜನೆಯಡಿಯಲ್ಲಿ ರಾಷ್ಟ್ರೀಯ ಹಸಿರು ನ್ಯಾಯಾಧೀಕರಣ ಪ್ರಾಧಿಕಾರ ಪರಿಸರ ಪರಿಹಾರ ನಿಧಿಯಡಿಯಲ್ಲಿ ಕೋಲಾರ ನಗರಕ್ಕೆ ಒಳಚರಂಡಿ ಉನ್ನತೀಕರಣ ಹಾಗೂ ತ್ಯಾಜ್ಯ ನೀರು ಸಂಸ್ಕರಣ ಘಟಕ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ರೂ.60.00 ಕೋಟಿಗಳ ಅನುದಾನ ಅನುಮೋದನೆಗೊಂಡಿದ್ದು. ಸದರಿ ಅನುದಾನದಲ್ಲಿ ಕೋಲಾರ ನಗರದ ಒಳ ಚರಂಡಿ ಕೊಳವೆ ಮಾರ್ಗಗಳ ದುರಸ್ಥಿ ಕಾಮಗಾರಿಯನ್ನು ಕೈಗೊಳ್ಳಲು ವಿಸ್ತೃತ ಯೋಜನಾ ವರದಿಯಲ್ಲಿ ಅನುವು ಮಾಡಲಾಗಿರುತ್ತದೆ. ಸದರಿ ಕಾಮಗಾರಿಗೆ ಟೆಂಡರ್ ಆಹ್ವಾನಿಸಲಾಗಿರುತ್ತದೆ. ಪ್ರಸ್ತುತ ಟೆಂಡರ್ ಪ್ರಕ್ರಿಯೆಗೆ ಕರ್ನಾಟಕ ಉಚ್ಛ ನ್ಯಾಯಲಯದಲ್ಲಿ ತಡೆಯಾಜ್ಞೆ ಇದ್ದು, ತಡೆಯಾಜ್ಞೆ ತೆರವುಗೊಂಡ ನಂತರ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |
| ಇ) | ಈ ನಗರದಲ್ಲಿ ಒಳಚರಂಡಿಯಿಂದ ಕೊಳಚೆ ನೀರು ತುಂಬಿ ರಸ್ತೆ ಮೇಲೆ ಹರಿಯುತ್ತಿರುವ ಮಾರ್ಗಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ಸಾರ್ವಜನಿಕ ಮಹತ್ವವುಳ್ಳ ಕಾಮಗಾರಿಗಳನ್ನು ಸಮರ್ಪಕವಾಗಿ ನಿರ್ವಹಿಸದ ನಗರಸಭೆ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; | |

ಸಂಖ್ಯೆ: ನಅಇ 62 ಸಿಎಸ್ಎಸ್ 2026

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು